**ಸಾಕ್ಷಿಯನ್ನು ದಿನಾಂಕ 07.11.2023 ರಂದು ಕರೆಸಿ ಪ್ರತಿಜ್ಞಾ ವಿಧಿ ಭೋಧಿಸಲಾಯಿತು.**

**ಮಧ್ಯಂತರ ಅರ್ಜಿಯ ಆದೇಶದ ಮೇರೆಗೆ ಪಾಟೀ ಸವಾಲು :- ಶ್ರೀ.ವಿ.ಎನ್.ಎಸ್ . ಆರೋಪಿ ಪರ ವಕೀಲರಿಂದಃ-**

4. ಚಾಸಾ-1 ರವರು ನನ್ನ ಮೇಲಾಧಿಕಾರಿ ಎಂದರೆ ಸರಿ. ಕೆಲವೊಂದು ಸಮಯದಲ್ಲಿ ಚಾಸಾ-1 ರವರ ಜೊತೆ ನಾನು ಸಹ ಗಸ್ತಿನಲ್ಲಿ ಹೋಗುತ್ತೇನೆ ಎಂದರೆ ಸರಿ. ಚಾಸಾ-1 ರವರ ನಿರ್ದೇಶನದಂತೆ ನಾನು ಕರ್ತವ್ಯವನ್ನು ನಿರ್ವಹಿಸುತ್ತೇನೆ ಎಂದರೆ ಸರಿ. ಘಟನಾ ಸ್ಥಳ ಜನ ನಿಬಿಡ ಸ್ಥಳ ಎಂದರೆ ಸರಿ. ಘಟನಾ ಸ್ಥಳದಲ್ಲಿ ಸಿಸಿಟಿವಿ ಕ್ಯಾಮರಾ ಅಳವಡಿಸಲಾಗಿರುತ್ತದೆ ಎಂದರೆ ಸರಿ. ದಿಃ27.07.2022 ರಂದು ನಾನು ಕರ್ತವ್ಯದಲ್ಲಿ ಇದ್ದೆನು ಎಂದು ತೋರಿಸಲು ನಾನು ಯಾವುದೇ ದಾಖಲಾತಿ ಹಾಜರು ಪಡಿಸಿರುವುದಿಲ್ಲ. ಸದರಿ ದಿನದಂದು ನೀವು ಮತ್ತು ಚಾಸಾ-1 ರವರು ನಿಮ್ಮ ಇಲಾಖಾ ವಾಹನದಲ್ಲಿ ಏಕ ಮುಖ ರಸ್ತೆಯಲ್ಲಿ ಹೋಗುತ್ತಿದ್ದಿರಿ ಎಂದರೆ ಸರಿಯಲ್ಲ. ಆ ಸಮಯದಲ್ಲಿ ಆರೋಪಿತರು ನಿಮ್ಮನ್ನು ಏಕ ಮುಖ ರಸ್ತೆಯಲ್ಲಿ ಏಕೆ ಹೋಗುತ್ತಿದ್ದೀರಿ ಎಂದು ಕೇಳಿದ್ದರು ಎಂದರೆ ಸರಿಯಲ್ಲ. ಆರೋಪಿತನು ಸಾರ್ವಜನಿಕರ ಸಮಕ್ಷಮ ಚಾಸಾ-1 ರವರನ್ನು ಕೇಳಿದ್ದು ಆದ್ದರಿಂದ ಕೋಪಗೊಂಡು ಚಾಸಾ-1 ರವರು ಆರೋಪಿತರ ವಿರುದ್ಧ ಸುಳ್ಳು ಪ್ರಕರಣ ದಾಖಲು ಮಾಡಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿತರು ಯಾವುದೇ ತಪ್ಪು ಮಾಡದೇ ಇದ್ದರೂ ಸಹ ಆರೋಪಿತರ ವಿರುದ್ಧ ಸುಳ್ಳು ಪ್ರಕರಣ ದಾಖಲು ಮಾಡಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ. ಆರೋಪಿತನಿಂದ ಯಾವುದೇ ವಾಹನವನ್ನು ಅಮಾನತ್ತು ಪಡಿಸಿಕೊಂಡಿರುವುದಿಲ್ಲ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಪ್ರಕಾರ ಬೆರಳಚ್ಚು ಮಾಡಲಾಯಿತು)

**ಓ ಹೇ ಕೆ ಸ ಇ**

**(ಲತಾ.ಜೆ),**

***32* ನೇ ಎ.ಸಿ.ಎಂ.ಎಂ. ಬೆಂಗಳೂರು.**